# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 16.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಚಿಕ್ಕಪೇಟೆ ಉಪ ವಿಭಾಗದ ವ್ಯಾಪ್ತಿಯ ಕುಂಬಾರಗುಂಡಿ ಪ್ರದೇಶದಲ್ಲಿ ಇತ್ತೀಚೆಗೆ ಪಾಲಿಕೆಯಿಂದ ಕೈಗೊಳ್ಳಲಾದ ರಾಜಕಾಲುವೆ ದುರಸ್ಥಿ ಕಾಮಗಾರಿ ಪ್ರಗತಿಯಲ್ಲಿತ್ತು. ಕಾಮಗಾರಿ ಪ್ರಗತಿಯಲ್ಲಿರುವಾಗ ಸಾರ್ವಜನಿಕರ ಸುರಕ್ಷತೆಗಾಗಿ ಅದರ ಸುತ್ತಲು ತಂತಿ ಬೇಲಿ ಅಥವಾ ತಾತ್ಕಾಲಿಕ ತಡೆಗೋಡೆ ನಿರ್ಮಿಸಿ, ಮುಂಜಾಗ್ರತೆ ಕ್ರಮ ಕೈಗೊಳ್ಳುವುದು ಪಾಲಿಕೆಯ ಆದ್ಯ ಕರ್ತವ್ಯವಾಗಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ನಿನ್ನೆ ರಾತ್ರಿ ಕಾರ್ಮಿಕನೊಬ್ಬ ರಾಜಕಾಲುವೆಯ ಬದಿಯಿಂದ ಹಾದುಹೋಗುವ ಸಂದರ್ಭದಲ್ಲಿ ಆಯತಪ್ಪಿ ಮೋರಿಯಲ್ಲಿ ಬಿದ್ದು, ಸತ್ತಿರಬಹುದೆಂದು ಪೋಲೀಸರು ಶಂಕೆ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಪಾಲಿಕೆ ಆಯುಕ್ತರು ಇಂದು ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ರವರಿಂದ ಪರಿಸ್ಥಿತಿ ಬಗ್ಗೆ ಸಂಪೂರ್ಣವಾದ ವಿವರಗಳನ್ನು ಪಡೆದು, ಸಾರ್ವಜನಿಕರ ಸುರಕ್ಷತೆ ಬಗ್ಗೆ ಕ್ರಮ ಕೈಗೊಳ್ಳುವಲ್ಲಿ ನಿರ್ಲಕ್ಷ್ಯದಿಂದ ಕರ್ತವ್ಯಲೋಪ ಎಸಗಿದ ರಾಜಕಾಲುವೆ ದುರಸ್ಥಿ ಕಾಮಗಾರಿಯ ಉಸ್ತುವಾರಿ ನೋಡಿಕೊಳ್ಳುತ್ತಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶ್ರೀ ತನ್ವೀರ್ ಅಹ್ಮದ್ ರವರನ್ನು ಅಮಾನತ್ತಿನಲ್ಲಿರಿಸಿ ಆದೇಶ ಹೊರಡಿಸಿದ್ದಾರೆ. ಕೂಡಲೇ ರಾಜಕಾಲುವೆ ಸುತ್ತಲು ತಾತ್ಕಾಲಿಕವಾಗಿ ಸುರಕ್ಷತೆ ಕ್ರಮಗಳನ್ನು ಕೈಗೊಳ್ಳಲು ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ರವರಿಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**